# ಮೊಜಾಂಬಿಕ್ ಗಣರಾಜ್ಯದ ಅಧ್ಯಕ್ಷರೊಂದಿಗೆ ಪ್ರಧಾನ ಮಂತ್ರಿಯ ಸಭೆ

ಆಗಸ್ಟ್ 24, 2023

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು 24 ಆಗಸ್ಟ್ 2023 ರಂದು ಜೋಹಾನ್ಸ್‌ಬರ್ಗ್‌ನಲ್ಲಿ 15 ನೇ ಬ್ರಿಕ್ಸ್ ಶೃಂಗಸಭೆಯ ಅಂಚಿನಲ್ಲಿ ಮೊಜಾಂಬಿಕ್ ಗಣರಾಜ್ಯದ ಅಧ್ಯಕ್ಷರಾದ ಹೆಚ್ .ಈ  ಫಿಲಿಪ್ ಜೆಸಿಂಟೊ ನ್ಯುಸಿ ಅವರನ್ನು ಭೇಟಿಯಾದರು.

2. ಸಂಸದೀಯ ಸಂಪರ್ಕಗಳು, ರಕ್ಷಣೆ, ಭಯೋತ್ಪಾದನೆ ನಿಗ್ರಹ, ಇಂಧನ, ಗಣಿಗಾರಿಕೆ, ಆರೋಗ್ಯ, ವ್ಯಾಪಾರ ಮತ್ತು ಹೂಡಿಕೆ, ಸಾಮರ್ಥ್ಯ ನಿರ್ಮಾಣ, ಕಡಲ ಸಹಕಾರ ಮತ್ತು ಜನರೊಂದಿಗೆ ಜನರ ಸಂಬಂಧಗಳು ಸೇರಿದಂತೆ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಹೆಚ್ಚಿಸುವ ಮಾರ್ಗಗಳ ಕುರಿತು ಉಭಯ ನಾಯಕರು ಉತ್ಪಾದಕ ಚರ್ಚೆ ನಡೆಸಿದರು.

3. ವಾಯ್ಸ್ ಆಫ್ ದಿ ಗ್ಲೋಬಲ್ ಸೌತ್ ಶೃಂಗಸಭೆಯಲ್ಲಿ ಅಧ್ಯಕ್ಷ ನ್ಯುಸಿ ಅವರ ಭಾಗವಹಿಸುವಿಕೆಯನ್ನು ಪ್ರಧಾನ ಮಂತ್ರಿ ಶ್ಲಾಘಿಸಿದರು.

4. ಅಧ್ಯಕ್ಷ ನ್ಯುಸಿ ಅವರು ಚಂದ್ರಯಾನ ಮಿಷನ್‌ನ ಯಶಸ್ಸಿಗೆ ಪ್ರಧಾನ ಮಂತ್ರಿಯನ್ನು ಅಭಿನಂದಿಸಿದರು ಮತ್ತು ಆಫ್ರಿಕನ್ ಒಕ್ಕೂಟದ G20 ಖಾಯಂ ಸದಸ್ಯತ್ವಕ್ಕಾಗಿ ಭಾರತದ ಉಪಕ್ರಮವನ್ನು ಶ್ಲಾಘಿಸಿದರು.

**ಜೋಹಾನ್ಸ್‌ಬರ್ಗ್**
**ಆಗಸ್ಟ್ 24, 2023**